Akashvani : Bangalore
Regional Bulletin Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

31.05.2024 18.40 hrs

<><*<><>*><>

<u>ಮುಖ್ಯಾಂಶಗಳು</u>

- ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ; ವಾಸ್ತವಾಂಶ ಪರಿಶೀಲಿಸಿ ಕ್ರಮ- ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಸಂಸದ ಪ್ರಜ್ವಲ್ ರೇವಣ್ಣ ಆರು ದಿನ ಎಸ್‌ಐಟಿ ಕಸ್ಟಡಿಗೆ; ನ್ಯಾಯಾಲಯ ಆದೇಶ
- ಇಂದು ವಿಶ್ವ ತಂಬಾಕು ರಹಿತ ದಿನ; ಹಲವೆಡೆ ಜನ ಜಾಗೃತಿ ಜಾಥಾ
- 'ನಿಮ್ಹಾನ್ಸ್‌ಗೆ' ವಿಶ್ವ ಆರೋಗ್ಯ ಸಂಸ್ಥೆಯ ಪ್ರತಿಷ್ಠಿತ ನೆಲ್ಸನ್ ಮಂಡೇಲಾ ಪ್ರಶಸ್ತಿ

<><*<><>*><>

ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ೧೮೭ ಕೋಟಿ ರೂಪಾಯಿ ಹಗರಣ ಸಂಬಂಧ ವಾಸ್ತವಾಂಶ ಪರಿಶೀಲನೆ ನಡೆಯಲಿದ್ದು, ಯಾರನ್ನು ರಕ್ಷಣೆ ಮಾಡುವ ಪ್ರಶ್ನೆಯೇ ಇಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಗಳೂರಿನಲ್ಲಿಂದು ಸ್ಪಷ್ಟಪಡಿಸಿದ್ದಾರೆ. ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಪ್ರತಿಪಕ್ಷಗಳ ಒತ್ತಾಯ ಕುರಿತು ಪ್ರತಿಕ್ರಿಯಿಸಿದ ಉಪ ಮುಖ್ಯಮಂತ್ರಿ, ಈ ಪ್ರಕರಣ ಕುರಿತು ಸೂಕ್ತ ರೀತಿಯ ತನಿಖೆ ನಡೆಯಲಿದ್ದು, ಸತ್ಯಾಸತ್ಯತೆ ಪರಿಶೀಲಿಸಿ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು. ಬೆಂಗಳೂರು ಪದವೀಧರ ಕ್ಷೇತ್ರದಿಂದ ನಡೆಯಲಿರುವ ವಿಧಾನಪರಿಷತ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ರಾಮೋಜಿ ಗೌಡರು ಗೆಲ್ಲುವ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು.

<><*<><>*><>

ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ೧೮೭ ಕೋಟಿ ರೂಪಾಯಿ ಹಗರಣಕ್ಕೆ ಸಂಬಂಧಿಸಿದಂತೆ ಪರಿಶಿಷ್ಟ ಪಂಗಡ ಕಲ್ಯಾಣ ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆ ಪಡೆದು ಬಂಧಿಸಬೇಕು ಎಂದು ಬಿಜೆಪಿ ನಾಯಕ ಡಾ.ಸಿ.ಎನ್.ಅಶ್ವಥ್ ನಾರಾಯಣ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣ ಸಂಬಂಧ, ಯುನಿಯನ್ ಬ್ಯಾಂಕ್ ಆಫ್ ಇಂಡಿಯಾ ಸಿಬಿಐ ಗೆ ದೂರು ನೀಡಿದ್ದು, ಅದರನ್ವಯ ತನಿಖೆ ನಡೆಯಬೇಕು ಎಂದು ಆಗ್ರಹಿಸಿದರು. ಕಳೆದ ಒಂದು ವರ್ಷದಿಂದ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಅಧಿಕಾರವನ್ನು ದುರ್ಬಳಕೆ ಮಾಡಿಕೊಂಡಿದೆ ಎಂದು ಅವರು ಆರೋಪಿಸಿದರು.

<><*<><>*><>

ಮಹಿಳೆಯರ ಮೇಲಿನ ದೌರ್ಜನ್ಯ ಪ್ರಕರಣ ಎದುರಿಸುತ್ತಿರುವ ಸಂಸದ  ಪ್ರಜ್ವಲ್ ರೇವಣ್ಣ ಅವರನ್ನು ಆರು ದಿನಗಳ ಕಾಲ ವಿಶೇಷ ತನಿಖಾ ತಂಡದ ವಶಕ್ಕೆ ನೀಡಿ, ನ್ಯಾಯಾಲಯ ಆದೇಶಿಸಿದೆ. ಕಳೆದ ರಾತ್ರಿ ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಂಧಿಸಿದ್ದ ಪ್ರಜ್ವಲ್ ರೇವಣ್ಣ ಅವರನ್ನು ಇಂದು ಮಧ್ಯಾಹ್ನ ವಿಶೇಷ ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಯಿತು. ಹೆಚ್ಚಿನ ವಿಚಾರಣೆಗಾಗಿ ಪ್ರಜ್ವಲ್ ಅವರನ್ನು ತಮ್ಮ ವಶಕ್ಕೆ ನೀಡುವಂತೆ ಎಸ್‌ಐಟಿ  ಕೋರಿತು. ವಾದ ಪ್ರತಿವಾದ ಆಲಿಸಿದ ನ್ಯಾಯಾಧೀಶರು ಆರು ದಿನಗಳ ಕಾಲ ವಿಶೇಷ ತನಿಖಾ ತಂಡ- ಎಸ್‌ಐಟಿ ವಶಕ್ಕೆ ನೀಡುವುದಾಗಿ ಆದೇಶಿಸಿದರು.

<><*<><>*><>

ಇಂದು ವಿಶ್ವ ತಂಬಾಕು ರಹಿತ ದಿನವನ್ನಾಗಿ ಆಚರಿಸಲಾಗುತ್ತಿದ್ದು, ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ತಂಬಾಕು ಉದ್ಯಮದ ಹಸ್ತಕ್ಷೇಪದಿಂದ ಮಕ್ಕಳನ್ನು ರಕ್ಷಿಸುವುದು". ಈ ವರ್ಷದ" ಧ್ಯೇಯ ವಾಕ್ಯವಾಗಿದೆ. ಆರೋಗ್ಯಕ್ಕೆ ಮಾರಕವಾಗಿರುವ ತಂಬಾಕಿನಿಂದ ದೂರವಿರೋಣ, ಸದೃಢ ಸಮಾಜ ನಿರ್ಮಿಸೋಣ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣ ಎಕ್ಸ್ ಸಂದೇಶದಲ್ಲಿ ತಿಳಿಸಿದ್ದಾರೆ. ಬಿಬಿಎಂಪಿ ಹಾಗೂ ಇತರ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಬೆಂಗಳೂರಿನಲ್ಲಿ ಆಯೋಜಿಸಿದ್ದ ವಾಕಥಾನ್‌ಗೆ  ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ವಿದ್ಯಾರ್ಥಿಗಳು ತಂಬಾಕು ಉತ್ಪನ್ನಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಕುಟುಂಬ ಸದಸ್ಯರು ಹಾಗೂ ಸ್ನೇಹಿತರಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು. ಸ್ವಾತಂತ್ರ್ಯ ಉದ್ಯಾವನದಿಂದ ಆರಂಭವಾದ ವಾಕಥಾನ್ ಟೌನ್ ಹಾಲ್ ಬಳಿ ಮುಕ್ತಾಯಗೊಂಡಿತು. ಬಳ್ಳಾರಿಯಲ್ಲಿ ಆಯೋಜಿಸಲಾಗಿದ್ದ ಕ್ಯಾನ್ಸರ್ ನಿರ್ಮೂಲನೆ ಕುರಿತ ಜಾಗೃತಿ ಜಾಥಾಕ್ಕೆ ವಿಮ್ಸ್‌ನ ಪ್ರಭಾರಿ ನಿರ್ದೇಶಕ ಡಾ.ಕೃಷ್ಣ, ಚಾಲನೆ ನೀಡಿದರು. ತಂಬಾಕು ಸೇವನೆಯಿಂದ ಆಗುವ ಅನಾಹುತಗಳ ಕುರಿತು ಭಿತ್ತಿ ಪತ್ರ ಪ್ರದರ್ಶನದ ಮೂಲಕ ಜನರಲ್ಲಿ ಅರಿವು ಮೂಡಿಸಲಾಯಿತು. ಚಿಕ್ಕಬಳ್ಳಾಪುರದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಆಕರ್ಷಣೆಯಿಂದ ಆರಂಭವಾಗುವ ತಂಬಾಕು ಉತ್ಪನ್ನಗಳ ಬಳಕೆ ಆರೋಗ್ಯ ಹಾಳು ಮಾಡುವ ಜೊತೆಗೆ ಬದುಕಿಗೂ ಕಂಟಕವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದರು.

ಧ್ವನಿ: ಪಿ.ಎನ್.ರವೀಂದ್ರ, ಜಿಲ್ಲಾಧಿಕಾರಿ

ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಕುರಿತು ಜನ ಜಾಗೃತಿ ಜಾಥಾ ಆಯೋಜಿಸಲಾಗಿತ್ತು. ಜಿಲ್ಲಾ ಪಂಚಾಯತ್ ನ ಕಾರ್ಯ ನಿರ್ವಹಣಾಧಿಕಾರಿ ಬಿ

ಸದಾಶಿವ ಪ್ರಭು, ಹೆಚ್ಚುವರಿ ಸಿವಿಲ್ ನ್ಯಾಯಾಧೀಶ ಅಶೋಕ್, ಎನ್‌ಟಿಸಿಪಿ ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಷಣ್ಮುಖ ನಾಯಕ್ ಮತ್ತಿತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಧಾರವಾಡದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ನ್ಯಾಯಾಧೀಶ ಪರಶುರಾಮ.ಎಫ್.ದೊಡ್ಡಮನಿ, ಪ್ರತಿಯೊಬ್ಬರು ದುಶ್ಚಟಗಳಿಂದ ದೂರವಿರಬೇಕು. ಉತ್ತಮ ಹವ್ಯಾಸಗಳನ್ನು ರೂಡಿಸಿಕೊಳ್ಳಬೇಕು, ಸಾಹಿತ್ಯ ಪುಸ್ತಕ, ಕೃತಿಗಳು ಮತ್ತು ಸಾಧಕರ ಸಾಹಸ ಕಥೆಗಳನ್ನು ಓದಬೇಕು ಎಂದು ಕಿವಿ ಮಾತು ಹೇಳಿದರು.

ಕಾರವಾರದಲ್ಲಿ ಮಾತನಾಡಿದ ಉತ್ತರಕನ್ನಡ ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರಾದ ದಿವ್ಯಶ್ರೀ, ತಂಬಾಕು ಉತ್ಪನ್ನಗಳ ಆಕರ್ಷಕ ಜಾಹೀರಾತುಗಳಿಗೆ ಆಕರ್ಷಿತರಾಗಿ, ದುಶ್ಚಟಗಳಿಗೆ ಬಲಿಯಾಗದಂತೆ ಇಂದಿನ ಯುವ ಪೀಳಿಗೆಯನ್ನು ರಕ್ಷಿಸಿ, ತಂಬಾಕು ರಹಿತ ಸಮಾಜ ಮಾಡಲು ಸಮಾಜದ ಪ್ರತಿಯೊಬ್ಬರು ಶ್ರಮಿಸಬೇಕು ಎಂದರು.

<><*<><>*><>

೨೦೨೪-೨೫ನೇ ಶೈಕ್ಷಣಿಕ ವರ್ಷದ ಶಾಲೆಗಳು ಇಂದಿನಿಂದ ಆರಂಭವಾಗಿವೆ. ಶಾಲಾ ಆರಂಭದ ಮೊದಲ ದಿನ ಶಿಕ್ಷಕರು ಮಕ್ಕಳಿಗೆ ಗುಲಾಬಿ ಹೂವು ಹಾಗೂ ಸಿಹಿ ತಿಂಡಿ ನೀಡಿ ಸ್ವಾಗತಿಸಿದರು. ಸರ್ಕಾರಿ, ಅನುದಾನಿತ, ಅನುದಾನ ರಹಿತ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳು ಗರಿಗೆದರಿದವು. ಗದಗ ನಗರದಲ್ಲಿ ಶಾಲಾ ಪ್ರಾರಂಭೋತ್ಸವ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಎಂ.ಎಲ್.ವೈಶಾಲಿ, ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದರು. ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ, ಅಕ್ಷರ ದಾಸೋಹ ಬಿಸಿಯೂಟ ಹಾಗೂ ಆರೋಗ್ಯ ಕಾಳಜಿ ವಹಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದರು. ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು, ವಿದ್ಯಾರ್ಥಿಗಳಿಗೆ ಇಂಗ್ಲೀಷ್ ಭಾಷಾ ವಿಷಯ ಬೋಧಿಸುವ ಮೂಲಕ ಶಾಲಾ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿದರು. ೨೦೨೪-೨೫ ರಲ್ಲಿ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆಯುವ ನಿಟ್ಟಿನಲ್ಲಿ ಎಲ್ಲರೂ ಕರ್ತವ್ಯ ನಿರ್ವಹಿಸಬೇಕೆಂದು ಅವರು ತಿಳಿಸಿದರು. ಮಡಿಕೇರಿಯಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಿ ಮಾತನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕ ಎಂ.ಚಂದ್ರಕಾಂತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ನಿಗದಿಪಡಿಸಿರುವ ವೇಳಾಪಟ್ಟಿಯಂತೆ ತರಗತಿಗಳು ನಡೆಯಲಿದೆ ಎಂದರು.

<><*<><>*><>

ಜೂನ್ ೪ ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯಕ್ಕೆ ರಾಜ್ಯದ ವಿವಿಧೆಡೆ ಜಿಲ್ಲಾಡಳಿತದಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಬಳ್ಳಾರಿ ಲೋಕಸಭಾ ಕ್ಷೇತ್ರದ ಮತ ಎಣಿಕೆ ನಗರದ ವೈ. ಮಹಾಬಲೇಶ್ವರಪ್ಪ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರ ತಿಳಿಸಿದ್ದಾರೆ. ಮತ ಎಣಿಕೆ ಕಾರ್ಯಕ್ಕಾಗಿ ಎಂಟು ಕೊಠಡಿಗಳನ್ನು ವ್ಯವಸ್ಥೆ ಮಾಡಲಾಗಿದೆ. ಎಣಿಕೆ ಕಾರ್ಯಕ್ಕೆ ೪೬೩ ಸಿಬ್ಬಂದಿ ನೇಮಕ ಮಾಡಲಾಗಿದ್ದು, ಅವರಿಗೆ ಎರೆಡು ಬಾರಿ ತರಬೇತಿ ನೀಡಲಾಗಿದೆ. ಮತ ಎಣಿಕೆ ಹಿನ್ನೆಲೆಯಲ್ಲಿ ಬಿಗಿಭದ್ರತೆ ಕಲ್ಪಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು. ಕೋಲಾರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಮತ ಎಣಿಕೆ ಕಾರ್ಯಕ್ಕೆ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಯಾವುದೇ ಲೋಪದೋಷವಾಗದಂತೆ ಕರ್ತವ್ಯ ನಿರ್ವಹಿಸಬೇಕೆಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅಕ್ರಂ ಪಾಷ ಸೂಚಿಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ನಾರಾಯಣ ಮಾತನಾಡಿ, ಪೊಲೀಸರೊಂದಿಗೆ ಸಮನ್ವಯ ಸಾಧಿಸಿಕೊಂಡು ಮತ ಎಣಿಕೆ ಕಾರ್ಯ ಸುಸೂತ್ರವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು. ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಸುಗಮವಾಗಿ ನಡೆಯಲು ಅಗತ್ಯ ಸಿದ್ಧತೆ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ಮತಎಣಿಕೆ ನಡೆಯಲಿದೆ. ಉಮೇದುವಾರರು ಮತಎಣಿಕೆ ಕಾರ್ಯಕ್ಕೆ ಸುಮಾರು ೧೨೫ಮಂದಿ ಏಜೆಂಟರನ್ನು ನೇಮಿಸಿಕೊಳ್ಳಲು ಸೂಚಿಸಲಾಗಿದೆ ಎಂದರು. ಉತ್ತರ ಕನ್ನಡ ಜಿಲ್ಲೆ ಕುಮಟಾದ ಮತ ಎಣಿಕೆ ಕೇಂದ್ರದ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಆದೇಶಿಸಿದ್ದಾರೆ. ಮತ ಎಣಿಕೆ ಕೇಂದ್ರದ ಸುತ್ತಲಿನ ೧೦೦ ಮೀಟರ್ ವ್ಯಾಪ್ತಿಯನ್ನು ಪಾದಚಾರಿ ವಲಯ ಎಂದು ಗುರುತಿಸಲಾಗಿದ್ದು, ಯಾವುದೇ ವಾಹನಗಳಿಗೆ ಪ್ರವೇಶ ಮತ್ತು ಪಾರ್ಕಿಂಗ್ ಮಾಡಲು ಅವಕಾಶ ಇರುವುದಿಲ್ಲ. ಮೊಬೈಲ್ ಫೋನ್, ಇನ್ನಿತರೆ ಎಲೆಕ್ಟ್ರಾನಿಕ್ ಉಪಕರಣಗಳ ಬಳಕೆಯನ್ನು ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದ್ದಾರೆ.

<><*<><>*><>

೨೦೨೪ ರಲ್ಲಿ ಆರೋಗ್ಯ ಕ್ಷೇತ್ರದಲ್ಲಿನ ಪ್ರಚಾರಕ್ಕಾಗಿ ವಿಶ್ವ ಆರೋಗ್ಯ ಸಂಸ್ಥೆಯಿಂದ ನೀಡುವ ಪ್ರತಿಷ್ಠಿತ ನೆಲ್ಸನ್ ಮಂಡೇಲಾ ಪ್ರಶಸ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಸಂಸ್ಥೆ ಭಾಜನವಾಗಿದೆ. ಕೇಂದ್ರ ಆರೋಗ್ಯ ಸಚಿವ ಡಾ.ಮನ್ಸೂಖ್ ಮಾಂಡವೀಯ ಅವರು, ನಿಮ್ಹಾನ್ಸ್ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದ್ದು, ಇದು "ಅಂತರ್ಗತ ಆರೋಗ್ಯ ರಕ್ಷಣೆಯಲ್ಲಿ ಭಾರತದ ಪ್ರಯತ್ನಗಳಿಗೆ ಮನ್ನಣೆ" ಎಂದು ಶ್ಲಾಘಿಸಿದ್ದಾರೆ. ಆರೋಗ್ಯ ಪ್ರಚಾರಕ್ಕೆ ಗಮನಾರ್ಹ ಕೊಡುಗೆಗಳನ್ನು ನೀಡಿದ ವ್ಯಕ್ತಿಗಳು, ಸಂಸ್ಥೆಗಳು ಅಥವಾ ಸರ್ಕಾರಿ

ಅಥವಾ ಸರ್ಕಾರೇತರ ಸಂಸ್ಥೆಗಳನ್ನು ಗುರುತಿಸಲು ೨೦೧೯ ರಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಆರೋಗ್ಯ ಪ್ರಚಾರಕ್ಕಾಗಿ ನೆಲ್ಸನ್ ಮಂಡೇಲಾ ಪ್ರಶಸ್ತಿಯನ್ನು ಸ್ಥಾಪಿಸಿದೆ. ಈ ಪ್ರಶಸ್ತಿಯು ನಿಮ್ಹಾನ್ಸ್‌ನ ಸಮರ್ಪಣೆ ಮತ್ತು ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತೇಜಿಸಲು ಅತ್ಯುತ್ತಮ ಕೊಡುಗೆಗಳಿಗೆ ಸಾಕ್ಷಿಯಾಗಿದೆ. ನಿಮ್ಹಾನ್ಸ್ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಕ್ಷೇತ್ರದಲ್ಲಿಯೇ ಮುಂಚೂಣಿಯಲ್ಲಿದೆ.

<><*<><>*><>

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಜೂನ್ ೩ ರಂದು ಬೆಳಿಗ್ಗೆ ೮ ಗಂಟೆಯಿಂದ ಸಂಜೆ ೪ ಗಂಟೆಯವರೆಗೆ ನಡೆಯಲಿದೆ. ಈ ಚುನಾವಣೆಗೆ ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ೨ ಮತಗಟ್ಟೆಗಳನ್ನು ಹಾಗೂ ಉಳಿದ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ತಲಾ ೧ ಮತಗಟ್ಟೆ ಸೇರಿದಂತೆ ಒಟ್ಟು ೭ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಮತ ಚಲಾಯಿಸಲಿರುವ ಅರ್ಹ ಮತದಾರರಿಗೆ ಅಂದು ಸಾಂದರ್ಭಿಕ ರಜೆ ಮಂಜೂರು ಮಾಡಲು ಆದೇಶಿಸಲಾಗಿದೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಮಾತನಾಡಿ, ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಚುನಾವಣಾ ಆಯೋಗದ ನಿಯಮ ಪಾಲಿಸದಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

<><*<><>*><>

ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಜೂನ್ ೩ ರಂದು ಬೆಳಿಗ್ಗೆ ೮ ಗಂಟೆಯಿಂದ ಸಂಜೆ ೪ ಗಂಟೆಯವರೆಗೆ ನಡೆಯಲಿದೆ. ಈ ಚುನಾವಣೆಗೆ ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ೨ ಮತಗಟ್ಟೆಗಳನ್ನು ಹಾಗೂ ಉಳಿದ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ತಲಾ ೧ ಮತಗಟ್ಟೆ ಸೇರಿದಂತೆ ಒಟ್ಟು ೭ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಶಿಕ್ಷಕರು ಮತದಾನ ಮಾಡಲು ಅನುಕೂಲವಾಗುವಂತೆ ಮತ ಚಲಾಯಿಸಲಿರುವ ಅರ್ಹ ಮತದಾರರಿಗೆ ಅಂದು ಸಾಂದರ್ಭಿಕ ರಜೆ ಮಂಜೂರು ಮಾಡಲು ಆದೇಶಿಸಲಾಗಿದೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದರ್ ಕುಮಾರ್ ಮೀನಾ ಮಾತನಾಡಿ, ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಚುನಾವಣಾ ಆಯೋಗದ ನಿಯಮ ಪಾಲಿಸದಿರುವ ವ್ಯಕ್ತಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ವಿಧಾನ ಪರಿಷತ್ತಿನ ಈಶಾನ್ಯ ಪದವೀಧರ ಕ್ಷೇತ್ರದ ಚುನಾವಣೆಯ ಮತದಾನಕ್ಕೆ ಬಳ್ಳಾರಿ ಜಿಲ್ಲೆಯಲ್ಲಿ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾತ್ ಕುಮಾರ್

ಮಾಹಿತಿ ನೀಡಿದ್ದಾರೆ. ಇದೇ ಮೊದಲ ಬಾರಿಗೆ ಮತದಾರರ ಅನುಕೂಲಕ್ಕಾಗಿ ಹೋಬಳಿಮಟ್ಟದಲ್ಲೂ ಮತದಾನ ಕೇಂದ್ರ ತೆರೆಯಲಾಗಿದೆ. ಈ ಕಾರ್ಯಕ್ಕೆ ಸಿಬ್ಬಂದಿಗೆ ಈಗಾಗಲೇ ತರಬೇತಿ ನೀಡಿದ್ದು, ಮತಪತ್ರಗಳಲ್ಲಿ ಆದ್ಯತೆಯ ಮತವನ್ನು ಅಂಕಿಗಳ ಮೂಲಕ ಮಾಡಬೇಕಿದೆ ಎಂದರು. ಕಾಂಗ್ರೆಸ್ ಮತ್ತು ಬಿಜೆಪಿ ಪಕ್ಷದ ಅಭ್ಯರ್ಥಿಗಳು ಸೇರಿ ೧೯ ಜನ ಸ್ಪರ್ಧಾ ಕಣದಲ್ಲಿ ಇದ್ದಾರೆ.

ಚಿಕ್ಕಮಗಳೂರು ಜಿಲ್ಲೆಯಲ್ಲಿ ನೈರುತ್ಯ ಪದವೀಧರರ, ನೈರುತ್ಯ ಶಿಕ್ಷಕರ ಕ್ಷೇತ್ರ ಮತ್ತು ದಕ್ಷಿಣ ಶಿಕ್ಷಕರ ಕ್ಷೇತ್ರಗಳ ಚುನಾವಣೆಗೆ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿರುವ ಮತದಾರರು ತಪ್ಪದೆ ಮತದಾನ ಮಾಡುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಮನವಿ ಮಾಡಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜೂನ್ ಪ್ರಥಮ ವಾರದಲ್ಲೆ ಮುಂಗಾರು ಮಳೆ ಆರಂಭ ಸಾಧ್ಯತೆ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮುಂಗಾರು ಪೂರ್ವ ಸಿದ್ಧತೆಗಳ ಕುರಿತು ಮಾಹಿತಿ ನೀಡಿದ ಅವರು,  ನೆರೆ, ಪ್ರವಾಹ, ಭೂಕುಸಿತ ಪ್ರದೇಶಗಳಲ್ಲಿ ಸಂಭವನೀಯ ಹಾನಿ ನಿಯಂತ್ರಣ ಹಾಗೂ ತುರ್ತು ರಕ್ಷಣಾ ಕಾರ್ಯಾಚರಣೆಗಾಗಿ ಎನ್‌ಡಿಆರ್‌ಎಫ್ ಜೂನ್ ೧ರಂದು ಜಿಲ್ಲೆಗೆ ಆಗಮಿಸಲಿದೆ. ರಾಷ್ಟ್ರೀಯ ಪ್ರಾಕೃತಿಕ ವಿಕೋಪ ನಿರ್ವಹಣಾ ತಂಡದ ಜತೆಗೆ ರಾಜ್ಯ ತಂಡವನ್ನು ಮಂಗಳೂರು ಮತ್ತು ಪುತ್ತೂರಿನಲ್ಲಿ ನಿಯೋಜಿಸಲಾಗುತ್ತಿದೆ ಎಂದರು. ಜಿಲ್ಲೆಯ ೮೭ ಗ್ರಾಮಗಳನ್ನು ಸಂಭವನೀಯ ಪ್ರವಾಹ ಪೀಡಿತ, ಭೂಕುಸಿತ ಪ್ರದೇಶಗಳಾಗಿ ಗುರುತಿಸಲಾಗಿದ್ದು, ಈ ಗ್ರಾಮಗಳ ಒಟ್ಟು ೯೦ ಪ್ರದೇಶಗಳನ್ನು ಪ್ರವಾಹ ಪೀಡಿತ ಹಾಗೂ ೭೩ ಪ್ರದೇಶಗಳನ್ನು ಭೂಕುಸಿತ ಪ್ರದೇಶಗಳೆಂದು ಗುರುತಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು ೯೭ ಕಾಳಜಿ ಕೇಂದ್ರಗಳನ್ನು ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಭೂಕುಸಿತ, ಪ್ರವಾಹ, ಅಗ್ನಿ ಅವಘಡ ಸೇರಿದಂತೆ ಇತರ ಯಾವುದೇ ವಿಪತ್ತುಗಳು ಸಂಭವಿಸಿದ್ದಲ್ಲಿ ಸಮರ್ಪಕವಾಗಿ ಎದುರಿಸಲು ಜಿಲ್ಲಾ ಮಟ್ಟದಲ್ಲಿ ಮಾತ್ರವಲ್ಲದೆ, ಪ್ರತಿ ಗ್ರಾಮಪಂಚಾಯಿತಿ, ವಾರ್ಡ್ ಮಟ್ಟದಲ್ಲಿಯೂ ಕಮಾಂಡರ್‌ಗಳನ್ನು ನೇಮಕ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಮಂಗಳೂರಿಗೆ ಸಮೀಪದ ಸಸಿಹಿತ್ಲು ಕಡಲಲ್ಲಿ ಆಯೋಜಿಸಿರುವ 'ರಾಷ್ಟ್ರೀಯ ಓಪನ್ ಸರ್ಫಿಂಗ್ ಚಾಂಪಿಯನ್‌ಶಿಪ್' ಜಲಕ್ರೀಡೆಗೆ ಜಿಲ್ಲಾಧಿಕಾರಿ  ಮುಲ್ಲೈ ಮುಗಿಲನ್ ಇಂದು ಬೆಳಗ್ಗೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಕರಾವಳಿಯಲ್ಲಿ ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿವೆ. ಸಸಿಹಿತ್ಲು ಪ್ರದೇಶ ಸರ್ಫಿಂಗ್ ಗೆ ಹೇಳಿ ಮಾಡಿಸಿದ ತಾಣವಾಗಿದೆ. ಜಿಲ್ಲಾಡಳಿತ

ಕೂಡ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದೆ ಎಂದರು. ಸರ್ಫಿಂಗ್ ಫೆಡರೇಶನ್ ಆಫ್ ಇಂಡಿಯಾ ಉಪಾಧ್ಯಕ್ಷ ರಾಮ್ ಮೋಹನ್ ಪರಾಂಜಪೆ, ಮಾತನಾಡಿ ಜಲಕ್ರೀಡೆಯಲ್ಲಿ ಸುಮಾರು ೭೫ ಸರ್ಫರ್‌ಗಳು ಭಾಗವಹಿಸುತ್ತಿದ್ದಾರೆ. ನಾಲ್ಕು ವಿಭಾಗಗಳಲ್ಲಿ ಸ್ಪರ್ಧೆ ನಡೆಯಲಿದೆ ಎಂದು ತಿಳಿಸಿದರು.

<><*<><>*><>

ಲೋಕಸಭಾ ಚುನಾವಣೆಯ ಏಳನೇ ಹಾಗೂ ಕೊನೆಯ ಹಂತದ ಮತದಾನ ನಾಳೆ ನಡೆಯಲಿದೆ. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದ್ದು, ೯೦೪ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧಾರವಾಗಲಿದೆ.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಕೋಲಾರ ಜಿಲ್ಲೆಯಲ್ಲಿ ಜಾನುವಾರುಗಳ ಮೇವಿನ ಸಮಸ್ಯೆಗೆ ಸಂಬಂಧಿಸಿದಂತೆ ದೂರುಗಳು ಬಂದಲ್ಲಿ ತಕ್ಷಣ ಸ್ಪಂದಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಪಶು ಸಂಗೋಪನೆ ಇಲಾಖೆಯ ಉಪ ನಿರ್ದೇಶಕ ಜಿ.ತುಳಸಿರಾಮಯ್ಯ ತಿಳಿಸಿದ್ದಾರೆ.

೨. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾ ಜಂಟಿ ಕೃಷಿ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಇನ್ನು ಹವಾವರ್ತಮಾನ...

ರಾಜ್ಯದ ಕರಾವಳಿಯ ಕೆಲವುಕಡೆ, ದಕ್ಷಿಣ ಒಳನಾಡಿನ ಒಂದೆರಡು ಕಡೆ ಮಳೆಯಾಗಿದೆ. ಉತ್ತರ ಒಳನಾಡಿನಲ್ಲಿ ಒಣಹವೆ ಮುಂದುವರೆದಿತ್ತು. ಆಗುಂಬೆಯಲ್ಲಿ ೫ ಸೆಂಟಿ ಮೀಟರ್, ಗೋಣಿಕೊಪ್ಪಲು ೩, ಧರ್ಮಸ್ಥಳ, ಕೋಟಾ, ಮಂಕಿಯಲ್ಲಿ ತಲಾ ೧ ಸೆಂಟಿ ಮೀಟರ್ ಮಳೆಯಾಗಿದೆ. ಕಲಬುರಿಗಿಯಲ್ಲಿ ೪೧.೩ ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ ದಾಖಲಾಗಿದೆ. ಮುನ್ಸೂಚನೆಯಂತೆ ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ಹಲವೆಡೆ ಗುಡುಗು ಸಹಿತ ಹಗುರ ಮಳೆ ಸಾಧ್ಯತೆ. ಬೆಂಗಳೂರು ಹಾಗು ಸುತ್ತಮುತ್ತ ಸಾಮಾನ್ಯ ಮೋಡ ಕವಿದ ವಾತಾವರಣ. ಹಗುರ ಮಳೆ ಸಂಭವ. ಗರಿಷ್ಠ ೩೪, ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗುವ ನಿರೀಕ್ಷೆಯಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>